ಕರ್ನಾಟಕ ವಿಧಾನ ಪರಿಷತ್ತು

1	ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ	: 1350
2	ಸದಸ್ಯರ ಹೆಸರು	: ಶ್ರೀ ಎಂ.ಪಿ. ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
3	ಉತ್ತರಿಸುವ ದಿನಾಂಕ	: 23.09.2021
4	ಉತ್ತರಿಸುವ ಸಚಿವರು	: ಗೃಹ ಸಚಿವರು

ಪ್ರ ಸಂ.	ಪ್ರಶ್ನೆ	ಉತ್ತರ
ಅ)	ದಿನಾಂಕ:10-07-2021 ರಂದು ಹಲವು ದಿನಪತ್ರಿಕೆಗಳಲ್ಲಿ ಕೊಡಗು ಜಿಲ್ಲೆಯ ಪೊಲೀಸ್ ಇಲಾಖೆಯಿಂದ ಖಜಾನೆಗೆ ಕಟ್ಟಬೇಕಾಗಿದ್ದ ಹಣವನ್ನು ಸಿಬ್ಬಂದಿಗಳು ಲೂಟಿ ಮಾಡಿರುವುದಾಗಿ ವರದಿಯಾಗಿರುವುದು ನಿಜವೇ; ಹಾಗಿದ್ದಲ್ಲಿ, ವಿವರ ನೀಡುವುದು;	ಕೊಡಗು ಜಿಲ್ಲಾ ಪೊಲೀಸ್ ಕಛೇರಿಯಲ್ಲಿ ರೂ 16,96,000/-ಗಳ ಮೊತ್ತದ ಸರ್ಕಾರದ ಹಣ ದುರುಪಯೋಗ ಆಗಿರುವ ಬಗ್ಗೆ ದಿ:10/07/2021 ರಂದು ದಿನಪತ್ರಿಕೆಗಳಲ್ಲಿ ಸುದ್ದಿ ಪ್ರಕಟವಾಗಿರುತ್ತದೆ. ಆದರೆ, ಪೊಲೀಸ್ ಅಧೀಕ್ಷಕರು ಕೊಡಗು ಜಿಲ್ಲೆ ರವರು ಪರಿಶೀಲನೆ ನಡೆಸಿ ಸಲ್ಲಿಸಿರುವ ವರದಿಯ ಪ್ರಕಾರ ನಗದು ಶಾಖೆಯಲ್ಲಿ ರೂ 8,40,000/-ಗಳ ಮೊತ್ತದ ಹಣ ದುರುಪಯೋಗವಾಗಿರುವುದಾಗಿ ವರದಿ ಸಲ್ಲಿಸಿರುತ್ತಾರೆ.
ಆ)	ಈ ಹಣವನ್ನು ದುರ್ಬಳಕೆ ಮಾಡಿಕೊಂಡ ಸಿಬ್ಬಂದಿಗಳ ಮೇಲೆ ಕೈಗೊಂಡ ಕ್ರಮಗಳೇನು; ಮುಂದೆ ಬೇರೆ ನೌಕರರುಗಳು ಈ ರೀತಿಯ ಅಪರಾಧ ಮಾಡದಂತೆ ತಡೆಯಲು ಸರ್ಕಾರವು ತೆಗೆದುಕೊಂಡ ಕಠಿಣ ಕ್ರಮಗಳೇನು? ವಿವರ ನೀಡುವುದು;	ಜಿಲ್ಲಾ ಪೊಲೀಸ್ ಕಛೇರಿಯಲ್ಲಿ ಹಣ ದುರುಪಯೋಗಪಡಿಸಿಕೊಂಡಿರುವ ಸಿಬ್ಬಂದಿಗಳ ವಿರುದ್ಧ ಮಡಿಕೇರಿ ನಗರ ಪೊಲೀಸ್ ಠಾಣೆಯಲ್ಲಿ ಮೊ.ಸಂ.0044/2021 ಕಲಂ 409, 417, 420 ಐಪಿಸಿ ರೀತ್ಯಾ ಪ್ರಕರಣ ದಾಖಲಾಗಿರುತ್ತದೆ. ಈ ಪ್ರಕರಣದಲ್ಲಿ ಆರೋಪಿತರನ್ನು ನ್ಯಾಯಾಂಗ ಬಂಧನಕ್ಕೂ ಸಹ ಒಳಪಡಿಸಲಾಗಿರುತ್ತದೆ. ಅಲ್ಲದೆ, ಹಣ ದುರುಪಯೋಗಪಡಿಸಿಕೊಂಡ ಸಿಬ್ಬಂದಿಗಳನ್ನು ಪೊಲೀಸ್ ಅಧೀಕ್ಷಕರು, ಕೊಡಗು ಜಿಲ್ಲೆ ರವರು ಅಮಾನತ್ತು ಆದೇಶದ ಸಂಖ್ಯೆ:ಡಿಇ/ಸಿ/28/2021(ಓಬಿ)199/2021, ದಿನಾಂಕ:10-07-2021ರಲ್ಲಿ ಸೇವೆಯಿಂದ ಅಮಾನತ್ತು ಮಾಡಿದ್ದು, ಪ್ರಸ್ತುತ ಸದರಿ ಸಿಬ್ಬಂದಿಗಳು ಅಮಾನತ್ತಿನಲ್ಲಿಯೇ ಮುಂದುವರೆದಿರುತ್ತಾರೆ. ಈ ರೀತಿ ಸರ್ಕಾರದ ಹಣ ದುರುಪಯೋಗಪಡಿಸಿಕೊಂಡಿರುವ ಸಿಬ್ಬಂದಿಗಳ ವಿರುದ್ಧ ಕೆ.ಸಿಎಸ್ (ಸಿಸಿ&ಎ) ರೂಲ್ಸ್ -1957ರ ನಿಯಮ-11 ಮತ್ತು 13 ರ ಪ್ರಕಾರ ನಿಯಮಾನುಸಾರ ಕಠಿಣ ಶಿಸ್ತಿನ ಕ್ರಮ ಕೈಗೊಳ್ಳಲಾಗುತ್ತಿದೆ. ಡಿಜಿ ಮತ್ತು ಐಜಿಪಿ ಕಛೇರಿಯ ಸುತ್ತೋಲೆ ದಿನಾಂಕ:07/10/2020 ಮತ್ತು 27/05/2021 ಗಳಲ್ಲಿ ಹಣದ ವಹಿವಾಟಿನ ಸಂಬಂಧಪಟ್ಟ ದಾಖಲೆಗಳನ್ನು ಆಗಿಂದ್ದಾಗೆ ಪರಿಶೀಲನೆ ನಡೆಸಿ ಹಾಗೂ ಹಣ ದುರುಪಯೋಗ ತಡೆಗಟ್ಟುವಲ್ಲಿ ಸೂಕ್ತ ಕ್ರಮ ವಹಿಸುವಂತೆ ಎಲ್ಲಾ ಘಟಕಾಧಿಕಾರಿಗಳಿಗೆ ಸೂಚನೆ ನೀಡಲಾಗಿದೆ.

ಸಂಖ್ಯೆ: ಒಇ 116 ಪಿಇಎಂ 2021

(ಆರಗ ಜ್ಞಾನೇಂದ್ರ)
ಗೃಹ ಸಚಿವರು